**<u>ಪ್ರಧಾನ ಸಿವಿಲ್ ಮತ್ತು  ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ</u>**

**ಸಿ.ಸಿ. ನಂ. 23/2023**

| | | | |
|---|---|---|---|
| **ಹೆಸರು** | **:** | **ಮಹೇಶ** | **ದೋ.ಸಾ. 7** |
| **ತಂದೆಯ ಹೆಸರು** | **:** | **ಚನ್ನಬಸಪ್ಪ** | **ಪ್ರಾ.ಸಾ. 1** |
| **ವಯಸ್ಸು** | **:** | **23 ವರ್ಷ** | **ದಿನಾಂಕಃ 14-02-2024** |
| **ಉದ್ಯೋಗ** | **:** | **ಒಕ್ಕಲುತನ** | |
| **ವಾಸಸ್ಥಳ** | **:** | **ಗೌಡನಳ್ಳಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ಈ ಪ್ರಕರಣದ ಸಾಕ್ಷಿದಾರರಾದ ಚಾಸಾ-6 ಮತ್ತು 17 ನನಗೆ ಗೊತ್ತಿಲ್ಲ.

ಈಗ ನನಗೆ ತೋರಿಸಲಾದ ದಾಖಲೆಯಲ್ಲಿರುವ  ಸಹಿ ನನ್ನದೇ. ಸಾಕ್ಷಿ ನೋಡಿ ಗುರುತಿಸಿದ ದಾಖಲೆಯನ್ನು ಈಗ ನಿಪಿ-1 ಎಂದೂ, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಈಗ್ಗೆ ಸುಮಾರು 1 ವರ್ಷದ ಹಿಂದೆ ನಾನು ಮತ್ತು ನನ್ನ ಸ್ನೇಹಿತರು ಗೌಡನಳ್ಳಿ ಗ್ರಾಮದಲ್ಲಿರುವ ಹೋಟಲನಲ್ಲಿ ಚಹಾಕುಡಿಯುತ್ತಿದ್ದಾಗ ಅಲ್ಲಿಗೆ ಬಂದ ಪೋಲಿಸರು ನಿಪಿ-1 ರ ದಾಖಲೆಯ ಮೇಲೆ ನನ್ನ ಸಹಿ ಪಡೆದುಕೊಂಡರು.

ನಿಪಿ-1 ರ ದಾಖಲೆಯಲ್ಲಿ ಏನು ಬರೆದಿದೆ ಎನ್ನುವುದು ನನಗೆ ಗೊತ್ತಿಲ್ಲ. ಪೋಲೀಸರು ಅದನ್ನು ನನಗೆ ಓದಿ ಹೇಳಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ ಮತ್ತು ನನ್ನ ಸಮಕ್ಷಮ ಯಾವುದೇ ವಸ್ತುವನ್ನು ಜಪ್ತಿ ಮಾಡಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರು ಜರುಗಿಸಿದ ಪಂಚನಾಮೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ದಿನಾಂಕಃ 05-06-2022 ರಂದು ಚಿಂಚೋಳಿ ಪೋಲಿಸ ಠಾಣಾ ಆವರಣಕ್ಕೆ ಕರೆಸಿದ್ದ ಚಿಂಚೋಳಿ ವೃತ್ತ ನಿರೀಕ್ಷಕರಾಗಿದ್ದ ಚಾಸಾ-20 ರವರು ಅವರ ಸಿಬ್ಬಂದಿ ಚಾಸಾ-17 ರವರು

ಹಾಜರುಪಡಿಸಿದ KA 32 B 7028 ನೇ ನಂಬರಿನ ಆಟೋವನ್ನು ಅಪಘಾತ ಪ್ರಕರಣವೊಂದಕ್ಕೆ ಸಂಬಂಧಪಟ್ಟಂತೆ ನಿಪಿ-1 ರ ಪಂಚನಾಮೆಯನ್ನು ಸಂಜೆ 05-00 ರಿಂದ 06-00 ವರೆಗೆ ಬರೆದು ಜಪ್ತು ಮಾಡಿದರು ಎನ್ನುವುದು ಸರಿಯಲ್ಲ.

ನಿಪಿ-1 ರ ದಾಖಲೆಯನ್ನು ಪೋಲೀಸರು ನನಗೆ ಓದಿ ಹೇಳಿದ್ದರು ಎನ್ನುವುದು ಸರಿಯಲ್ಲ.

ನನ್ನ ಸಮಕ್ಷಮವೇ ನಿಪಿ-1 ರ ಪಂಚನಾಮೆಯನ್ನು ಪೋಲೀಸರು ಜರುಗಿಸಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರವಾಗಿ ಶ್ರೀಮತಿ ಎಸ್.ಎಸ್.ಡಿ. ವಕೀಲರಿಂದಃ ಇಲ್ಲಾ</u>**

**ಮರುವಿಚಾರಣೆಃ ಇಲ್ಲಾ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ.**